# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1750 (2031)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಕಂದಾಯ ಸಚಿವರು

ವಿಷಯ : ಕಲ್ಯಾಣ ಕರ್ನಾಟಕದಲ್ಲಿನ ಬರಪೀಡಿತ ತಾಲ್ಲೂಕು

(ಅ) ಕಲ್ಯಾಣ ಕರ್ನಾಟಕದ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಗುರುತಿಸಲಾಗಿದೆ; ಬರಪೀಡಿತ ತಾಲ್ಲೂಕುಗಳಾಗಿ ಘೋಷಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

(ಆ) ಬರ ಪರಿಸ್ಥಿತಿ ನಿಭಾಯಿಸಲು ಸರ್ಕಾರವು ಜಿಲ್ಲಾಧಿಕಾರಿಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯ ತಾಲ್ಲೂಕಿನಲ್ಲಿ ಅನಾವೃಷ್ಟಿಯಿಂದ ಎಷ್ಟು ರೈತರ ಬೆಳೆಗಳು ಹಾನಿಗೊಳಗಾಗಿವೆ; (ಬೆಳೆವಾರು ಕ್ಷೇತ್ರ ಮತ್ತು ಹಾನಿ ಮೊತ್ತದ ಮಾಹಿತಿ ನೀಡುವುದು)

(ಈ) ಹಾನಿಗೊಳಗಾದ ರೈತರಿಗೆ ಪರಿಹಾರ ನೀಡಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ರೈತರಿಗೆ ಎಷ್ಟು ಪರಿಹಾರ ನೀಡಲಾಗಿದೆ; ಇಲ್ಲವಾದಲ್ಲಿ, ಇನ್ನೂ ಪರಿಹಾರ ನೀಡದೇ ಇರಲು ಕಾರಣಗಳೇನು; ಬರ ಪರಿಹಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?